ಶ್ರೀ ಎಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಬಂದಿದೆ.

ಪ್ರಸ್ತಾವಿಸಲಾದ ಶಹಾಪುರ ಮತ ಕ್ಷೇತ್ರಕ್ಕೆ ಸಂಬಂಧಿಸಿದ ಹತ್ತು ಜನವಸತಿಗಳ ಪೈಕಿ ಮಾಳಳ್ಳಿ, ತಿಪನಟಗಿ, ಮತ್ತು ಮೂಲಗತ್ತಿ ಜನವಸತಿಗಳನ್ನು ಹೊರತುಪಡಿಸಿ ಇನ್ನುಳಿದ 7 ಜನವಸತಿಗಳು ಆರ್ಸೇನಿಕ್ ಅಂಶದಿಂದ ಕೂಡಿವೆ.

ಆ) ಮತ್ತು ಇ) ನೀರಿನ ಗುಣಮಟ್ಟದ ಸಮಸ್ಯೆಯನ್ನು ಹೊಂದಿರುವ ಮೇಲಿನ 7 ಜನವಸತಿಗಳಿಗೆ ನೀರು ಶುದ್ಧೀಕರಣ ಘಟಕಗಳ ಮೂಲಕ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಮಾಡಲು ಮಂಜೂರಾತಿ ನೀಡಲಾಗಿದೆ. ಈ ಸಮಸ್ಯಾತ್ಮಕ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಭೂಮಿಯ ಮೇಲ್ಮೈ ಜಲಮೂಲ ಆಧಾರಿತ 2 ಬಹು ಗ್ರಾಮ ಯೋಜನೆಗಳನ್ನು **ರೂ.25.00ಕೋಟಿ** ಅಂದಾಜಿನಲ್ಲಿ ಮಂಜೂರು ಮಾಡಿದ್ದು, ಟೆಂಡರ್ ಪ್ರಕ್ರಿಯೆ ನಡೆದಿದೆ.

ವಸತಿ ಯೋಜನೆಯಲ್ಲಿ ಅವ್ಯವಹಾರ

1363(1691); ಶ್ರಿ ಗುರು ಪಾಟೀಲ ಶಿರವಾಳ

ಅ) ಶಹಾಪುರ ಮತಕ್ಷೇತ್ರದಲ್ಲಿ ವಸತಿ ಯೋಜನೆಯ ಫಲಾನುಭವಿಗಳನ್ನು ಗ್ರಾಮ ಸಭೆಗಳಲ್ಲಿ ಆಯ್ಕೆ ಮಾಡದೆ ದಾಖಲೆಗಳನ್ನು ಸೃಷ್ಟಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮ ಸಭೆಯಲ್ಲಿ ಆಯ್ಕೆ ಮಾಡದೆ ನಿಯಮ ಉಲ್ಲಂಘನೆ ಮಾಡಿದವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಬಂದಿದೆ.

ಆ) ಶಹಾಪುರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಹಾಪುರ ಮತ್ತು ಸುರಪುರ ತಾಲ್ಲೂಕುಗಳ ಹತ್ತಿಗುಡೂರ, ಹೊಸ್ಕೆರೆ, ಹೋತಪೇಟ್, ಗೋಗಿ (ಕೆ), ಯಾಳಗಿ ಮತ್ತು ಕರಡಕಲ್ ಗ್ರಾಮ ಪಂಚಾಯತಿಗಳಲ್ಲಿ 2013–14ನೇ ಸಾಲಿನ ಬಸವ ವಸತಿ ಯೋಜನೆಯಡಿ ಗ್ರಾಮ ಸಭೆ ನಡೆಸದೆ ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ಮನೆಗಳನ್ನು ಹಂಚಿಕೆ ಮಾಡಿರುವ ಬಗ್ಗೆ ದೂರು ಸಲ್ಲಿಕೆಯಾಗಿತ್ತು. ಆ ದೂರಿನ ಹಿನ್ನೆಲೆಯಲ್ಲಿ ಸದರಿ ಗ್ರಾಮ ಪಂಚಾಯಿತಿಗಳ ವಸತಿ ಯೋಜನೆಗಳ ಅನುಷ್ಠಾನ ಪ್ರಕ್ರಿಯೆಯನ್ನು ತಡೆ ಹಿಡಿಯಲಾಗಿದೆ.

ಈ ಬಗ್ಗೆ ತನಿಖೆಗಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಯಾದಗಿರಿ ಇವರು ತನಿಖಾ ತಂಡವನ್ನು ರಚಿಸಿರುತ್ತಾರೆ. ಸದರಿ ತಂಡ ನೀಡುವ ವರದಿಯನ್ವಾಧರಿಸಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಸುವರ್ಣ ಗ್ರಾಮೋದಯ ಯೋಜನೆ

1364(884); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) 2013–14 ಮತ್ತು 2014–15ನೇ ಸಾಲಿನ ಆಯವ್ಯಯದಲ್ಲಿ ಸುವರ್ಣ ಗ್ರಾಮೋದಯ ಯೋಜನೆಗೆ ನಿಗದಿಪಡಿಸಲಾಗಿದ್ದ ಅನುದಾನವೆಷ್ಟು;

ಆ) ಈ ಪೈಕಿ ಡಿಸೆಂಬರ್ 31, 2014ರವರೆಗೆ ಎಷ್ಟು ಅನುದಾನವನ್ನು ಖರ್ಚು ಮಾಡಲಾಗಿದೆ;

ಇ) ಈ ಯೋಜನೆಯಡಿಯಲ್ಲಿ ಮೇಲ್ಕಂಡ ಅವಧಿಯಲ್ಲಿ ಬೀದರ್ ಜಿಲ್ಲೆಯ ಪ್ರತಿ ಮತಕ್ಷೇತ್ರದಲ್ಲಿ ತೆಗೆದುಕೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; ಈ ಕಾಮಗಾರಿಗೆ ವೆಚ್ಚ ಮಾಡಲಾದ ಹಣವೆಷ್ಟು; ಈ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು;